# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಆಯ್ಕೆ ಸಮಿತಿ ಮೂಲಕ ಸಂದರ್ಶನ ನಡೆಸಿ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:
1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ:ಕಾಶಿಇ/80/ಖಾಹುಮಾ/2014-15/ನೇವಿ-2, ದಿನಾಂಕ: 24-03-2023.
2) ಸರ್ಕಾರದ ಪತ್ರ ಸಂಖ್ಯೆ:ಇಡಿ 240 ಯುಪಿಸಿ 2014, ದಿನಾಂಕ: 01-09-2017.
3) ಯು.ಜಿ.ಸಿ ಅಧಿಸೂಚನೆ ಸಂಖ್ಯೆ:ಎಫ್-1-ಇ/2017 (ಇಸಿ/ಪಿಎಸ್, ದಿನಾಂಕ:18-07-2018.
4) ಸರ್ಕಾರದ ಪತ್ರ ಸಂಖ್ಯೆ:ಇಡಿ 160 ಯುಪಿಸಿ 2022(ಇ), ದಿನಾಂಕ: 05-12-2022.

*******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ವಿವಿಧ ಕಾರಣಗಳಿಂದ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಆಯ್ಕೆ ಸಮಿತಿ ಮೂಲಕ ಸಂದರ್ಶನ ನಡೆಸಿ ಭರ್ತಿ ಮಾಡುವ ಸಂಬಂಧ ಆಡಳಿತ ಮಂಡಳಿಗಳಿಗೆ ಕೆಲವೊಂದು ಷರತ್ತು / ಮಾನದಂಡಗಳನ್ನು ನಿಗಧಿಪಡಿಸುವ ಕುರಿತು ಸರ್ಕಾರದ ಆದೇಶ ಕೋರಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ದಿನಾಂಕ:31.12.2015 ರೊಳಗೆ ಖಾಲಿಯಾಗಿರುವ ಬೋಧಕರ ಹುದ್ದೆಗಳನ್ನು ಉಪಲಬ್ಧ ಕಾರ್ಯಭಾರದ ಆಧಾರದ ಮೇಲೆ ನಿಯಮಾನುಸಾರ ಭರ್ತಿ ಮಾಡಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಸರ್ಕಾರದ ಪತ್ರದಲ್ಲಿ ಆರ್ಥಿಕ ಇಲಾಖೆಯು ನಿಗಧಿಪಡಿಸಿರುವ ಚೆಕ್‌ಲಿಸ್ಟನಂತೆ ವಿದ್ಯಾರ್ಹತೆ, ಮೀಸಲಾತಿ, ಕಾರ್ಯಭಾರದ ಆಧಾರದ ಮೇಲೆ ನಿಯಮಾನುಸಾರ ಪರಿಶೀಲಿಸಿ ಖಾಲಿಯಿರುವ ಹುದ್ದೆಗಳನ್ನು ಖಾಸಗಿ ಅನುದಾನಿತ (ಪದವಿ ಕಾಲೇಜು) ಶಿಕ್ಷಣ ಸಂಸ್ಥೆಗಳಿಗೆ ಆರ್ಥಿಕ ಇಲಾಖೆಯು ನಿಗಧಿಪಡಿಸಿರುವ ಮಾನದಂಡಗಳನ್ವಯ ಪಾರದರ್ಶಕವಾಗಿ ಖಾಲಿ ಹುದ್ದೆ ಭರ್ತಿ ಮಾಡಲು ನಿಯಮಾನುಸಾರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸುವ ಬಗ್ಗೆ ಅನುಮತಿ ನೀಡಲು ಆಯುಕ್ತರು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ. ಅದರಂತೆ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆಯುಕ್ತಾಲಯದಿಂದ ಅನುಮತಿ ಪಡೆದ ನಂತರ ಆಡಳಿತ ಮಂಡಳಿಗಳ ಹಂತದಲ್ಲಿ ಖಾಲಿ ಹುದ್ದೆಗಳನ್ನು ಪಾರದರ್ಶಕವಾಗಿ ಮತ್ತು ಏಕರೂಪವಾಗಿ ನಡೆಸಲು ಕೆಲವೊಂದು ಮಾರ್ಗಸೂಚಿ / ಷರತ್ತುಗಳನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದ್ದು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 160 ಯುಪಿಸಿ 2022**

**ಬೆಂಗಳೂರು, ದಿನಾಂಕ:28-03-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಾಂಕ:31-12-2015 ರೊಳಗೆ ವಿವಿಧ ಕಾರಣಗಳಿಂದ

ಖಾಲಿಯಾದ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಿದ್ದು, ಅದರಂತೆ ಆಡಳಿತ ಮಂಡಳಿಗಳು ಅಧಿಸೂಚನೆ ಹೊರಡಿಸಿ ಅಭ್ಯರ್ಥಿಗಳನ್ನು ಆಯ್ಕೆ ಸಮಿತಿ ಮೂಲಕ ಸಂದರ್ಶನ ನಡೆಸಿ ಭರ್ತಿ ಮಾಡಿಕೊಳ್ಳಲು (ಸಂದರ್ಶನ ನಡೆಸಲು ಪ್ರಸ್ತುತ ಬಾಕಿ ಇರುವ ಎಲ್ಲಾ ಪ್ರಕರಣಗಳು ಒಳಗೊಂಡಂತೆ) ಈ ಕೆಳಕಂಡ ಷರತ್ತು / ಮಾನದಂಡಗಳನ್ನು ನಿಗಧಿಪಡಿಸಿ ಆದೇಶಿಸಿದೆ.

1) ಖಾಲಿ ಹುದ್ದೆ ಭರ್ತಿಗೆ ಸಂಬಂಧಿಸಿದಂತೆ ಯು.ಜಿ.ಸಿ. ಅಧಿಸೂಚನೆ UGC REGULATIONS ON MINIMUM QUALIFICATIONS FOR APPOINTMENT OF TEACHERS AND OTHER ACADEMIC STAFF IN UNIVERSITIES AND COLLEGES AND OTHER MEASURES FOR THE MAINTENANCE OF STANDARDS IN HIGHER EDUCATION, 2018. DATED:18.07.2018ರ ಟೇಬಲ್-3ಬಿ ರಲ್ಲಿ ನಿಗಧಿಪಡಿಸಲಾಗಿರುವಂತೆ, ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಅಂಕಗಳನ್ನು ನಿಗಧಿಪಡಿಸಿ 1:5 ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಹ್ವಾನಿಸುವುದು.

2) ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಸಂದರ್ಶನದ ಕರೆಯನ್ನು ರಿಜಿಸ್ಟರ್ ಪೋಸ್ಟ್/ಸ್ಪೀಡ್ ಪೋಸ್ಟ್ ಮುಖಾಂತರ ರವಾನಿಸುವುದು.

3) ಸಂದರ್ಶನಕ್ಕೆ ಈ ಕೆಳಗಿನಂತೆ 110 ಅಂಕಗಳನ್ನು ನಿಗಧಿಪಡಿಸುವುದು.

**Table**

| Sl. No | Academic Record | Score | | | |
|---|---|---|---|---|---|
| 1 | Graduation | 80% & Above=21 | 60% to less than 80%=19 | 55% to less than 60%=16 | 45% to less than 55%=10 |
| 2 | Post-Graduation | 80% & Above=25 | 60% to less than 80%=23 | 55% (50% in case of SC/ST/OBC (non-creamy layer)/PWD) to less than 60%=20 | |
| 3 | M.Phil | 60% & above=07 | 55% to less than 60%=05 | | |
| 4 | Ph.D. | 25 | | | |
| 5 | NET with JRF | 10 | | | |
| | NET | 08 | | | |
| | SLET/SET | 05 | | | |
| 6 | Research Publications (2 marks for each research publications published in UGC – CARE listed journals) | 06 | | | |
| 7 | Teaching/Post Doctoral Experience (2 marks for one year each) | 10 | | | |
| 8 | Awards | | | | |
| | International/National Level (Awards given by International | 03 | | | |

| | | |
|---|---|---|
| | Organizations/Government of India/government of India recognized National Level Bodies) | |
| | State Level (Awards given by state Government). | 02 |
| 9 | Domain Knowledge (ವಿಷಯ ಪರಿಣಿತಿ) | 05 |
| 10 | Communication Skills (ಸಂವಹನ ಕೌಶಲ್ಯ) | 05 |

However, if the period of teaching/post-doctoral experience is less than one year then the marks shall be reduced proportionately.

Note:

A.
(i) M.Phil. + Ph.D. Maximum - 25 Marks
(ii) JRF/NET/SET Maximum - 10 Marks
(iii) In awards category Maximum - 03 Marks

B. Academic Score - 84
Research Publications - 06
Teaching Experience – 10
Total= 100

C. SLET/SET score shall be valid for appointment in respective State Universities/Colleges/ institutions only.

D. Domain Knowledge-05 &
Communication Skills-05
Total=10
GRAND TOTAL – 110

4) ಅಭ್ಯರ್ಥಿಗಳು ಸಂದರ್ಶನದಲ್ಲಿ ಒಟ್ಟು-110 ಅಂಕಗಳಿಗೆ ಪಡೆಯುವ ಅಂಕಗಳ ಆಧಾರದ ಮೇಲೆಯೇ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ. ಧನಂಜಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).

---

ಸಂಖ್ಯೆ:ಕಾಶಿಇ/80/ಖಾಹುಮಾ/2014-15/ನೇವಿ-2

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:28.03.2023.

ಮೇಲ್ಕಾಣಿಸಿದ ಸರ್ಕಾರದ ಆದೇಶವನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿದೆ.

ಇವರಿಗೆ,
1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ, ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ,
2. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಖಾಸಗಿ ಅನುದಾನಿತ ಕಾಲೇಜುಗಳ ಆಡಳಿತ ಮಂಡಳಿ ಹಾಗೂ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ,

ಪ್ರತಿ ರವಾನೆ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು, ಬೆಂಗಳೂರು.
2. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು-ಚಲನಾ ಆದೇಶವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
3. ರಕ್ಷಕ ಕಡತ
4. ಕಛೇರಿ ಪ್ರತಿ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ